# ಕರ್ನಾಟಕ ಸರ್ಕಾರದ ನಡವಳಿಗಳು

ಕುಲಸಚಿವರ ಆಪ್ತ ಕಾರ್ಯಾಲಯ
ಸಂಖ್ಯೆ 539
ದಿನಾಂಕ 27/12/2023

ವಿಷಯ: ಮೆಟ್ರಿಕ್ ನಂತರದ ವ್ಯಾಸಂಗದಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಕಾರ್ಯಕ್ರಮ ಸಂಬಂಧ ಹಾಲಿ ಇರುವ ಆದೇಶವನ್ನು ಮಾರ್ಪಡಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಸಕಇ 89 ಸಮನ್ವಯ 2013(2), ದಿನಾಂಕ:04-09-2013.
2. ಸರ್ಕಾರದ ಆದೇಶ ಸಂಖ್ಯೆ:ಸಕಇ 9 ಪಕವಿ 2023 ದಿನಾಂಕ: 23-08-2023.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕಕಡತ ಪ್ರಸ್ತಾವನೆ ಸಂಖ್ಯೆ: SWD/SCHC/SC/60/2023(1231413)

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1)ರ ಆದೇಶದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಶೇ.60 ರಿಂದ ಶೇ.74.99 ಅಂಕ ಪಡೆದಲ್ಲಿ ರೂ.7000/-ಗಳನ್ನು ಮತ್ತು ಶೇ.75 ಕ್ಕಿಂತ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ರೂ.15000/- ಗಳನ್ನು [illegible] ಪ್ರೋತ್ಸಾಹ ಧನ ಮಂಜೂರು ಮಾಡಲು ಆದೇಶಿಸಲಾಗಿದೆ. ಅದರಂತೆ [illegible]ತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೂ ಯಾವುದೇ ಆದಾಯ ಮಿತಿ ನಿಗದಿಪಡಿಸದೆ ಪ್ರತಿಯೊಬ್ಬರಿಗೂ ಪ್ರೋತ್ಸಾಹಧನ ನೀಡಲು ಆದೇಶಿಸಲಾಗಿರುತ್ತದೆ.

ಮುಂದುವರೆದು, ಮೇಲೆ ಓದಲಾದ ಕ್ರಮಾಂಕ (2)ರ ಆದೇಶದಲ್ಲಿ ಯಾವುದೇ ಆದಾಯ ಮಿತಿ ನಿಗದಿಪಡಿಸದೆ ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳಲ್ಲಿ ಪ್ರಥಮ ಭಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಎಲ್ಲಾ ಅರ್ಹ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ Online ಮೂಲಕ ಅರ್ಜಿ ಪಡೆದು ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗಳಿಗೆ DBT ಮುಖಾಂತರ ಪ್ರೋತ್ಸಾಹಧನವನ್ನು ಮಂಜೂರು ಮಾಡಲು ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನದ ಮಾರ್ಗಸೂಚಿಯನುಸಾರ ಈ ಕೆಳಗಿನಂತೆ ಕೋರ್ಸುಗಳನ್ನು ವಿಂಗಡಣೆ ಮಾಡಿ, ವಿದ್ಯಾರ್ಥಿಗಳಿಗಿರಬೇಕಾದ ಅರ್ಹತೆ ಹಾಗೂ ಮಂಜೂರಾತಿ ವಿಧಾನದ ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

| ಕ್ರ.ಸಂ | ಕೋರ್ಸಿನ ವೃಂದ | ಒಳಗೊಳ್ಳುವ ಎಲ್ಲಾ ಕೋರ್ಸುಗಳ ವಿವರ | ಮಂಜೂರು ಮಾಡಬೇಕಾದ ಮೊತ್ತ ರೂ.ಗಳಲ್ಲಿ |
|---|---|---|---|
| 1 | Group-1 | **Degree and Post Graduate Level all Professional Courses.**<br><br>All Professional Courses in Medicine, Ayurveda, Yoga, Homeopathy, Naturopathy, Nursing, Engineering, Technology, Planning, Architecture, Design, Fashion Technology, Agriculture, Horticulture, Forestry, Veterinary and allied Sciences, Management, Business Finance / Administration, Computer Science Applications, LLB, LLM and integrated LLB LLM., MCA<br><br>**Note**: Diploma and Certificate courses in Medicine and Allied Sciences, and Engineering and Allied Technology Courses are not eligible for this scheme.<br><br>Phd Students Are not eligible for Prize Money under this Scheme | Rs. 35,000/- |
| 2 | Group-2 | **Other Professional Courses leading to Degree and Post Graduation Courses**<br><br>All professional Courses leading to degree and All post graduation Courses which include<br><br>M.Ed, M.Pharma, B.Pharma, B.Sc Nursing, BFS, BFA, BVA, BCA, MA, MCom, MSc, MTA, BHM, BPT, MPT, MFA | Rs. 30,000/- |
| 3 | Group-3 | **All Graduate Courses**<br>include BA, BCom, BSc, BEd, BPEd, BBA, BMC, BMS, | Rs. 25,000/- |
| 4 | Group-4 | **All Post Matriculation and Non Degree Courses**<br>II PUC, 12th (CBSE / ICSE), 3 years' Diploma | Rs. 20,000/- |

ಮೇಲೆ ಓದಲಾದ ಕ್ರಮಾಂಕ (3)ರ ಏಕಕಡತದಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರು SSLC ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳ ಪ್ರೋತ್ಸಾಹ ಧನ ಯೋಜನೆಯ ಸಂಬಂಧ ಈ ಕೆಳಕಂಡಂತೆ ಆದಾಯ ಮಿತಿ ಹಾಗೂ ಕನಿಷ್ಠ ಅಂಕಗಳನ್ನು ನಿಗದಿಪಡಿಸಿ ಪರಿಷ್ಕೃತ ಆದೇಶ ಹೊರಡಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಕ್ರ. ಸಂ. | ಕೋರ್ಸ್ | ಒಳಗೊಳ್ಳುವ ಕೋರ್ಸುಗಳು | ನಿಗದಿಪಡಿ ಸಬಹುದಾದ ಕುಟುಂಬದ ವಾರ್ಷಿಕ ಆದಾಯ ಮಿತಿ | ನಿಗದಿಪಡಿ ಸಬಹುದಾದ ಅಂಕಗಳು ಶೇ | ಮಂಜೂರು ಮಾಡಲಾಗುವ ಮೊತ್ತ ರೂಗಳಲ್ಲಿ |
|---|---|---|---|---|---|
| 1 | SSLC | SSLC | ರೂ. 6.00 ಲಕ್ಷ | ಶೇ. 75 and above | ರೂ. 15,000/- |
| 2 | Group-1 | <u>**Degree and Post Graduate Level all Professional Courses**</u>.<br>All Professional Courses in Medicine, Ayurveda, Yoga, Homeopathy, Naturopathy, Nursing, Engineering, Technology, Planning, Architecture, Design, Fashion Technology, Agriculture, Horticulture, Forestry, Veterinary and allied Sciences, Management, Business Finance / Administration, Computer Science Applications, LLB, LLM and integrated LLB LLM., MCA<br>Note: Diploma and Certificate courses in Medicine and Allied Sciences, and Engineering and Allied Technology Courses are not eligible for this scheme.<br>Phd Students Are not eligible for Prize Money under this | ರೂ. 6.00 ಲಕ್ಷ | ಶೇ. 65 and above | ರೂ. 35,000/- |

| | | | | | |
|---|---|---|---|---|---|
| 3 | Group-2 | **<u>Other Professional Courses leading to Degree and Post Graduation Courses</u>**<br><br>All professional Courses leading to degree and All post graduation Courses which include<br><br>M.Ed, M.Pharma, B.Pharma, B.Sc Nursing, BFS, BFA, BVA, BCA, MA, MCom, MSc, MTA, BHM, BPT, MPT, MFA | ರೂ. 6.00 ಲಕ್ಷ | ಶೇ. 60 and above | ರೂ. 30,000/- |
| 4 | Group-3 | All Graduate Courses include BA, BCom, BSc, BEd, BPEd, BBA, BMC, BMS, | ರೂ. 6.00 ಲಕ್ಷ | ಶೇ. 60 and above | ರೂ. 25,000/- |
| 5 | Group-4 | **<u>All Post Matriculation and Non Degree Courses</u>**<br><br>**<u>II PUC, 12th (CBSE / ICSE), 3 years' Diploma in Polytechnic, ITI, Diploma in Nursing, GNM Nursing</u>** | ರೂ. 6.00 ಲಕ್ಷ | ಶೇ. 75 and above | ರೂ. 20,000/- |

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಸಕಇ 09 ಪಕವಿ 2023, ಬೆಂಗಳೂರು ದಿನಾಂಕ:02-12-2023.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಂತೆ, ಸರ್ಕಾರದ ಆದೇಶ ಸಂಖ್ಯೆ:ಸಕಇ 89 ಸಮನ್ವಯ 2013(2), ದಿನಾಂಕ:04-09-2013 ಮತ್ತು ಸರ್ಕಾರದ ಆದೇಶ ಸಂಖ್ಯೆ:ಸಕಇ 9 ಪಕವಿ 2023 ದಿನಾಂಕ: 23-08-2023ರ ಆದೇಶಗಳನ್ನು ರದ್ದುಪಡಿಸುತ್ತಾ, 2023-2024ನೇ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರುವಂತೆ ಎಸ್.ಎಸ್.ಎಲ್.ಸಿ ಹಾಗೂ ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳಲ್ಲಿ ಪ್ರಥಮ ಭಾರಿಗೆ, ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ Online ಮೂಲಕ ಅರ್ಜಿ ಪಡೆದು ಅರ್ಹ ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗಳಿಗೆ DBT ಮುಖಾಂತರ ಪ್ರೋತ್ಸಾಹಧನವನ್ನು ಮಂಜೂರು ಮಾಡಲು ಈ ಕೆಳಕಂಡಂತೆ ಕೋರ್ಸುಗಳನ್ನು ವಿಂಗಡಣೆ ಮಾಡಿ, ಪ್ರತಿಯೊಂದು ಕೋರ್ಸಿನಲ್ಲೂ ವಿದ್ಯಾರ್ಥಿಗಳು ಪ್ರೋತ್ಸಾಹಧನ ಯೋಜನೆಗೆ ಪಡೆಯಬೇಕಾದ ಕನಿಷ್ಠ ಅಂಕಗಳು, ಅರ್ಜಿ ಸಲ್ಲಿಸಲು ಗರಿಷ್ಠ ಆದಾಯ ಮಿತಿ, ವಿದ್ಯಾರ್ಥಿಗಳಿಗಿರಬೇಕಾದ ಅರ್ಹತೆ ಹಾಗೂ ಮಂಜೂರಾತಿ ವಿಧಾನದ

| ಕ್ರ.ಸಂ. | ಕೋರ್ಸ್ | ಒಳಗೊಳ್ಳುವ ಕೋರ್ಸುಗಳು | ಕುಟುಂಬದ ವಾರ್ಷಿಕ ಆದಾಯ ಮಿತಿ | ನಿಗದಿಪಡಿಸಲಾದ ಶೇಕಡ ಅಂಕಗಳು | ಪ್ರೋತ್ಸಾಹಧನದ ಮೊತ್ತ ರೂಗಳಲ್ಲಿ |
|---|---|---|---|---|---|
| 1 | SSLC | SSLC | ರೂ. 6.00 ಲಕ್ಷ | ಶೇ. 75 and above | ರೂ. 15,000/- |
| 2 | Group-1 | **<u>Degree and Post Graduate Level all Professional Courses</u>**. All Professional Courses in Medicine, Ayurveda, Yoga, Homeopathy, Naturopathy, Nursing, Engineering, Technology, Planning, Architecture, Design, Fashion Technology, Agriculture, Horticulture, Forestry, Veterinary and allied Sciences, Management, Business Finance / Administration, Computer Science Applications, LLB, LLM and integrated LLB LLM., MCA<br><br>Note: Diploma and Certificate courses in Medicine and Allied Sciences, and Engineering and Allied Technology Courses are not eligible for this scheme.<br><br>Phd Students Are not eligible for Prize Money under this Scheme | ರೂ. 6.00 ಲಕ್ಷ | ಶೇ. 65 and above | ರೂ. 35,000/- |

| | | | | | |
|---|---|---|---|---|---|
| 3 | Group-2 | **Other Professional Courses leading to Degree and Post Graduation Courses**<br><br>All professional Courses leading to degree and All post graduation Courses which include<br><br>M.Ed, M.Pharma, B.Pharma, B.Sc Nursing, BFS, BFA, BVA, BCA, MA, MCom, MSc, MTA, BHM, BPT, MPT, MFA | ರೂ. 6.00 ಲಕ್ಷ | ಶೇ. 60 and above | ರೂ. 30,000/- |
| 4 | Group-3 | All Graduate Courses include BA, BCom, BSc, BEd, BPEd, BBA, BMC, BMS, | ರೂ. 6.00 ಲಕ್ಷ | ಶೇ. 60 and above | ರೂ. 25,000/- |
| 5 | Group-4 | **All Post Matriculation and Non Degree Courses**<br><br>**II PUC, 12th (CBSE / ICSE), 3 years' Diploma in Polytechnic, ITI, Diploma in Nursing, GNM Nursing** | ರೂ. 6.00 ಲಕ್ಷ | ಶೇ. 75 and above | ರೂ. 20,000/- |

**ಪ್ರೋತ್ಸಾಹ ಧನ ಮೊತ್ತವನ್ನು ಪಡೆಯಲು ವಿದ್ಯಾರ್ಥಿಗಳಿಗೆ ಇರಬೇಕಾದ ಅರ್ಹತೆಗಳು:**

1. ಅರ್ಜಿ ಸಲ್ಲಿಸುವ ದಿನಾಂಕದಂದು ವಿದ್ಯಾರ್ಥಿಯು ಮೇಲೆ ಸೂಚಿಸಿದಂತೆ ಆದಾಯ ಮಿತಿ ವ್ಯಾಪ್ತಿಗೆ ಒಳಪಟ್ಟಿರುವ ಬಗ್ಗೆ ಸಕ್ಷಮ ಪ್ರಾಧಿಕಾರ ಮಂಜೂರು ಮಾಡಿದ ಚಾಲ್ತಿಯಲ್ಲಿರುವ ಆದಾಯ ಪ್ರಮಾಣ ಪತ್ರವನ್ನು ಆನ್‌ಲೈನ್ ಮೂಲಕ ಹಾಜರುಪಡಿಸಬೇಕು.
2. ವಿದ್ಯಾರ್ಥಿಗಳು ಕರ್ನಾಟಕ ಶಾಲಾ ಶಿಕ್ಷಣ ಹಾಗೂ ಮೌಲ್ಯಮಾಪನ ಮಂಡಳಿಯು ನಡೆಸುವ ವಾರ್ಷಿಕ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಶೇ.75 ಹಾಗೂ ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದಿರಬೇಕು.

3. ಪಿ.ಯು.ಸಿ/12th/ITI ಪರೀಕ್ಷೆಗಳ ಸಂಬಂಧ ಪ್ರಥಮ ಪ್ರಯತ್ನದಲ್ಲಿ ಶೇ.75 ಹಾಗೂ ಅಧಿಕ್ಕಿಂತ ಹೆಚ್ಚಿನ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರಬೇಕು.
4. ಉಳಿದ ಕೋರ್ಸುಗಳಿಗೆ ಸಂಬಂಧಿಸಿದಂತೆ ಪ್ರತಿ ವರ್ಷ ಪಬ್ಲಿಕ್ ಪರೀಕ್ಷೆ ಇದ್ದಲ್ಲಿ ಪ್ರತಿ ವರ್ಷವೂ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಅಂತಿಮವಾಗಿ ಪ್ರಥಮ ದರ್ಜೆಯಲ್ಲಿ ಪಾಸಾಗಿರಬೇಕು. ಈ ಕೋರ್ಸುಗಳಿಗೆ ಸೆಮಿಸ್ಟರ್ ಪದ್ಧತಿ ಇದ್ದಲ್ಲಿ ಎಲ್ಲಾ ಸೆಮಿಸ್ಟರ್ ಗಳಲ್ಲಿ ಪ್ರಥಮ ಪ್ರಯತ್ನದಲ್ಲಿಯೇ ಪಾಸಾಗಿರಬೇಕು.
5. ಯಾವುದೇ ಕೋರ್ಸುಗಳಲ್ಲಿ ಪ್ರತಿ ವರ್ಷದ ಪರೀಕ್ಷೆ ಅಥವಾ ಸೆಮಿಸ್ಟರ್ ಗಳಲ್ಲಿ compartmental / carry over system ರಡಿ ಪಾಸಾಗಿದ್ದರೆ ಅಂತಹವರು ಬಹುಮಾನದ ಹಣ ಪಡೆಯಲು ಅರ್ಹರಿರುವುದಿಲ್ಲ.
6. ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಮೇಲ್ಕಂಡ ಕೋರ್ಸುಗಳನ್ನು ಹೊರ ರಾಜ್ಯಗಳಲ್ಲಿ ವ್ಯಾಸಂಗ ಮಾಡಿದ್ದರೂ ಸಹಾ ಅರ್ಹರಾಗಿರುತ್ತಾರೆ. ಆದರೆ ಹೊರ ದೇಶಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಈ ಯೋಜನೆಯಡಿ ಬಹುಮಾನ ಪಡೆಯಲು ಅರ್ಹರಲ್ಲ.
7. ರಾಜ್ಯ / ಕೇಂದ್ರ ಸರ್ಕಾರದಿಂದ ಮಾನ್ಯತೆ ಪಡೆದ ವಿಶ್ವವಿದ್ಯಾಲಯ / ಯು.ಜಿ.ಸಿ ಯಿಂದ ಮಾನ್ಯತೆ ಪಡೆದ ಡೀಮ್ಡ್ ವಿಶ್ವವಿದ್ಯಾಲಯಗಳಡಿ ಬರುವ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡಿದ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಸ್ವಾಯತ್ತ (Autonomous) ಹಾಗೂ Karnataka State Open University, Mysuru ವಿದ್ಯಾಸಂಸ್ಥೆಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಮಾತ್ರ ಈ ಯೋಜನೆಗೆ ಅರ್ಹರಿರುತ್ತಾರೆ.
8. ಸಂಜೆ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳೂ ಸಹ ಈ ಯೋಜನೆಗೆ ಅರ್ಹತೆ ಪಡೆದಿರುತ್ತಾರೆ.
9. KSOU ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಪ್ರೋತ್ಸಾಹಧನ ಯೋಜನೆಗೆ ಅರ್ಹರಿರುತ್ತಾರೆ. KSOU ಹೊರತುಪಡಿಸಿ, ಹೊರರಾಜ್ಯದ ಮುಕ್ತ ವಿಶ್ವವಿದ್ಯಾಲಯಗಳ ಮೂಲಕ ಪದವಿ ಪಡೆದ ವಿದ್ಯಾರ್ಥಿಗಳು ಈ ಯೋಜನೆಗೆ ಅರ್ಹರಿರುವುದಿಲ್ಲ.
10. ITI ಕೋರ್ಸ್ ಸಂಬಂಧ, ಕಡ್ಡಾಯವಾಗಿ SSLC ನಂತರದಲ್ಲಿ ಯಾವುದೇ Year Gap ಇಲ್ಲದೇ 3 ವರ್ಷದ ITI ಗೆ ಸೇರಿ, ಪ್ರಥಮ ಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರಬೇಕು. PUC ನಂತರದಲ್ಲಿ ITI ಮಾಡಿದ ವಿದ್ಯಾರ್ಥಿಗಳು ಈ ಯೋಜನೆಗೆ ಅರ್ಹರಿರುವುದಿಲ್ಲ.
11. Diploma in Polytechnic ಕೋರ್ಸ್ ಸಂಬಂಧ SSLC ನಂತರದಲ್ಲಿ ಯಾವುದೇ Year Gap ಇಲ್ಲದೇ 3 ವರ್ಷದ Diploma in Polytechnic ಪ್ರಥಮ ಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರಬೇಕು. PUC ನಂತರದಲ್ಲಿ Diploma in Polytechnic ಮಾಡಿದ ವಿದ್ಯಾರ್ಥಿಗಳು ಈ ಯೋಜನೆಗೆ ಅರ್ಹರಿರುವುದಿಲ್ಲ.
12. ಸದರಿ ಯೋಜನೆಯಡಿ ಪ್ರೋತ್ಸಾಹಧನ ಪಡೆಯಲು ವಿದ್ಯಾರ್ಥಿಯ ಗರಿಷ್ಠ ವಯೋಮಿತಿ 35 ವರ್ಷಗಳನ್ನು ಮೀರಿರಬಾರದು.
13. ಯಾವುದೇ ವರ್ಷದಲ್ಲಿ ಪ್ರಾಕೃತಿಕ ವಿಕೋಪ ಹಾಗೂ ಇನ್ನಿತರೆ ಅನಿಯಂತ್ರಿತ ಕಾರಣಗಳಿಂದಾಗಿ, ಪರೀಕ್ಷೆ ರದ್ದುಪಡಿಸಿ ಕೇವಲ ತರಗತಿ ಅಂಕಗಳ ಆಧಾರದ ಮೇಲೆ ಅಂತಿಮ ವರ್ಷದಲ್ಲಿ ತೇರ್ಗಡೆ ಎಂದು ಘೋಷಿಸಿದ್ದರೆ, ಅಂತಹ ವಿದ್ಯಾರ್ಥಿಗಳು ಪ್ರೋತ್ಸಾಹ ಧನಕ್ಕೆ ಅರ್ಹತೆ ಪಡೆದಿರುವುದಿಲ್ಲ.
14. ಸರ್ಕಾರದಿಂದ ಮಾನ್ಯತೆ ಪಡೆಯದಿರುವ ವಿದ್ಯಾಸಂಸ್ಥೆಗಳಲ್ಲಿ ವ್ಯಾಸಂಗ [illegible]

<u>ಮಂಜೂರಾತಿ ವಿಧಾನ :-</u>

1. ಪ್ರೋತ್ಸಾಹಧನ ಯೋಜನೆಗೆ ಅರ್ಜಿಗಳನ್ನು ಜಿಲ್ಲಾ ಮಟ್ಟದಲ್ಲಿ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಇವರು ಆನ್ ಲೈನ್ ಮೂಲಕ ಆಹ್ವಾನಿಸಬೇಕು.
2. ವಿದ್ಯಾರ್ಥಿಯು ಇಲಾಖೆಯ ಪ್ರಾಯೋಜಕತ್ವದಲ್ಲಿ Mountaineering ತರಬೇತಿಯಲ್ಲಿ ಪಾಲ್ಗೊಂಡು ತನ್ನ ಸೆಮಿಸ್ಟರಿನ ಪರೀಕ್ಷೆಯನ್ನು ಮುಂದೂಡಿದ್ದರೆ ಹಾಗೂ Sports Quota/ NCC ಅಡಿ ವಿದ್ಯಾರ್ಥಿಗಳು ಸೆಮಿಸ್ಟರಿನ ಪರೀಕ್ಷೆಯನ್ನು ಮುಂದೂಡಿದ್ದರೆ, ಅಂತಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಗಣಿಸಿ, ಸಂಬಂಧಪಟ್ಟ ವಿದ್ಯಾಸಂಸ್ಥೆಯಿಂದ ದೃಢೀಕರಣ ಪಡೆದು ಪ್ರೋತ್ಸಾಹ ಧನ ಮಂಜೂರು ಮಾಡುವುದು.
3. ಪ್ರೋತ್ಸಾಹಧನವನ್ನು ಡಿ.ಬಿ.ಟಿ ಮೂಲಕ ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುವುದರಿಂದ Online ಮೂಲಕ ಅರ್ಜಿ ಸಲ್ಲಿಸುವ ಪೂರ್ವದಲ್ಲಿಯೇ ವಿದ್ಯಾರ್ಥಿಯು ತನ್ನ ಆಧಾರ್ ಸಂಖ್ಯೆಯನ್ನು ಕಡ್ಡಾಯವಾಗಿ ಬ್ಯಾಂಕ್ ಖಾತೆಯೊಂದಿಗೆ ಸೀಡ್ ಮಾಡಿಸಿರತಕ್ಕದ್ದು.
4. Online ನಲ್ಲಿ ಅರ್ಜಿ ಸಲ್ಲಿಸಿದ ದಿನಾಂಕದಿಂದ 15 ದಿನಗಳೊಳಗೆ Online ನಲ್ಲಿ Generate ಆದ ಸ್ವೀಕೃತಿ ಪತ್ರದೊಂದಿಗೆ ಸಂಪೂರ್ಣ ದಾಖಲೆಗಳನ್ನು (ಅಂದರೆ, ಜಾತಿ ಪ್ರಮಾಣ ಪತ್ರ, ಆಧಾರ್ ಪ್ರತಿ ಹಾಗೂ ಎಲ್ಲಾ ಸೆಮಿಸ್ಟರಿನ ದೃಢೀಕೃತ ಅಂಕಪಟ್ಟಿಗಳು) ಸಂಬಂಧಪಟ್ಟ ಕಾಲೇಜಿನ ಮುಖ್ಯಸ್ಥರಿಂದ ದೃಢೀಕರಿಸಿ, ವಿದ್ಯಾರ್ಥಿಯು ವ್ಯಾಸಂಗ ಮಾಡಿದ ಶೈಕ್ಷಣಿಕ ಸಂಸ್ಥೆ ಯಾವ ಜಿಲ್ಲೆಯಲ್ಲಿ ಇರುತ್ತದೆಯೋ ಅದೇ ಜಿಲ್ಲೆಯಲ್ಲಿನ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಇವರಿಗೆ ಅರ್ಜಿ ಸಲ್ಲಿಸಬೇಕು. ನಿಗದಿತ ಸಮಯದೊಳಗೆ ಸೂಕ್ತ ದಾಖಲೆಗಳನ್ನು ಸಲ್ಲಿಸದೇ ಇರುವ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸುವ ಅಧಿಕಾರವನ್ನು ಜಿಲ್ಲೆಯ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ರವರು ಹೊಂದಿರುತ್ತಾರೆ.
5. ಹೊರ ರಾಜ್ಯದಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು Native District ನಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು.
6. ಅರ್ಜಿ ಸಲ್ಲಿಕೆಯ ಜೇಷ್ಠತೆಯ ಆಧಾರದ ಮೇಲೆ ಪ್ರೋತ್ಸಾಹ ಧನವನ್ನು ಮಂಜೂರು ಮಾಡಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

2/12

(ಎಲ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

9/12/2023

ಇವರಿಗೆ,

1. ಮಹಾಲೇಖಪಾಲರು (ಲೆಕ್ಕ ಪತ್ರ ಲೆಕ್ಕಪರಿಶೋಧನೆ) ಪಾರ್ಕ್ ರಸ್ತೆ,

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾನೂನು ಮತ್ತು ಮಾನವ ಹಕ್ಕುಗಳ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳು(ಉನ್ನತ ಶಿಕ್ಷಣ ಇಲಾಖೆಯ ಮುಖಾಂತರ)
9. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
11. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
13. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
14. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
15. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಇ ಆಡಳಿತ ಕೇಂದ್ರ, ಸಿಆಸು ಇಲಾಖೆ(ಇ-ಆಡಳಿತ), ಬೆಂಗಳೂರು.
16. ಕಾರ್ಯಕ್ರಮ ನಿರ್ದೇಶಕರು, SSP, ಬೆಂಗಳೂರು.
17. ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ (ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ)
18. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, (ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂ. ಇವರ ಮುಖಾಂತರ)
19. ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು.
20. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ :

1. ಮಾನ್ಯ ಸಮಾಜ ಕಲ್ಯಾಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-1, 2 ಮತ್ತು 3 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.